ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ 57)
ನಮೂನೆ ಸಂಖ್ಯೆ 4

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್ ಕೇಸ್ ನಂಬರ್ : 250/2022**

**ಫ್ರಾಸಾ- 17 ಚಾಸಾ- 28**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಕುಮಾರ್ ಎಂ ಎನ್ |
| ತಂದೆಯ ಹೆಸರುಃ | : | ಲೇಟ್ ನರಸಿಂಹಯ್ಯ |
| ವಯಸ್ಸುಃ | : | 55 ವರ್ಷ |
| ಉದ್ಯೋಗಃ | : | ಪಿ ಎಸ್ ಐ |
| ವಾಸ | : | ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 11-05-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ನಾನು ದಿನಾಂಕ 4-2-2022 ರಿಂದ 21-7-2025 ರವರೆಗೆ ಹಾಸನದ ನಗರ ಪೊಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2.ದಿನಾಂಕ 4-7-22ರಂದು ನನ್ನನ್ನು ಚಾಸಾ-29ರವರು ಈ ಪ್ರಕರಣದ ಆರೋಪಿತರ ಪತ್ತೆಗಾಗಿ ನೇಮಕ ಮಾಡಿದ್ದರು. ಅದರಂತೆ ನಾನು ಅದೇದಿನಾಂಕದಂದು ಹಾಸನದ ಸಿಟಿ ಬಸ್ ನಿಲ್ದಾಣದಲ್ಲಿ ಬೆಳಿಗ್ಗೆ 10 ಗಂಟೆ ಸಮಯದಲ್ಲಿ ಈ ಪ್ರಕರಣದ ಆರೋಪಿಯನ್ನು ವಶಕ್ಕೆ ಪಡೆದು ಬೆಳಿಗ್ಗೆ 10-30 ಗಂಟೆಗೆ ಚಾಸಾ-29ರವರ ಮುಂದೆ ಹಾಜರುಪಡಿಸಿ ವರದಿಯನ್ನು ನಿಪಿ-22 ರಂತೆ ನೀಡಿರುತ್ತೇನೆ. ಅದರಲ್ಲಿ ನನ್ನ ರುಜು ಇದ್ದು ನಿಪಿ-22(ಎ) ಎಂದು ಗುರುತಿಸಲಾಯಿತು. ಸದರಿ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಅವರು ಈ ದಿನ ನ್ಯಾಯಾಲಯದ ಮುಂದೆ ಇದ್ದಾರೆ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಬಿ ವಿ ವಕೀಲರಿಂದಃ**

ಆರೋಪಿತರು ಕೃತ್ಯನಡೆದ ದಿನಾಂಕದಂದು ಮೃತಳನ್ನು ಆಸ್ಪತ್ರೆಗೆ ಚಿಕಿತ್ಸೆಗಾಗಿ ಸೇರಿಸಿ

ನಂತರದಲ್ಲಿ ಆಕೆಯ ದಫನ್ ಆಗುವವರೆಗೂ ಜೊತೆಯಲ್ಲೇ ಇದ್ದರು ಎಂದರೆ ನನಗೆ ಗೊತಿತಲ್ಲ. ಆರೋಪಿತರು ಹಾಸನದ ಸಿಟಿ ಬಸ್ ನಿಲ್ದಾಣದಲ್ಲಿ ಇದ್ದರು, ಅಲ್ಲೇ ಅವರನ್ನು ವಶಕ್ಕೆ ಪಡೆದಿರುತ್ತೇನೆ ಎನ್ನುವುದು ಸುಳ್ಳು ಮತ್ತು ಅವರನ್ನು ಅವರ ಮನೆಯಿಂದ ವಶಕ್ಕೆ ಪಡೆದಿದ್ದು ಎಂದರೆ ಸರಿಯಲ್ಲ. ತನಿಖಾಧಿಕಾರಿಯವರ ಸೂಚನೆ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**